ಹವಾ ನಿಯಂತ್ರಕ ಬಸ್ಸುಗಳು

3873(4614); ಶ್ರೀ ಮೇಟಿ ಹುಲ್ಲಪ್ಪ ಯಮನಪ್ಪ (ಬಾಗಲಕೋಟ)

ಅ) ಬಾಗಲಕೋಟೆಯಿಂದ ಬೆಂಗಳೂರು, ಮುಂಬೈ, ಹೈದ್ರಾಬಾದ್, ಪಣಜಿ, ಮತ್ತು ಗುಲಬರ್ಗಾ ಪ್ರಮುಖ ನಗರಗಳಿಗೆ ಹವಾನಿಯಂತ್ರಿತ ಬಸ್ಸನ್ನು ಓಡಿಸುವ ಯೋಜನೆ ಸರ್ಕಾರಕ್ಕೆ ಇದೆಯೇ;

ಆ) ಹಾಗಿದ್ದಲ್ಲಿ, ಯಾವಾಗ ಪ್ರಾರಂಭಿಸಲಾಗುವುದು?

ಶ್ರೀ ರಾಮಲಿಂಗಾರೆಡ್ಡಿ (ಸಾರಿಗೆ ಸಚಿವರು)

ಅ) **ಮತ್ತು ಆ)** ಈ ಯೋಜನೆ ಸದ್ಯಕ್ಕೆ ಇರುವುದಿಲ್ಲ.

ಜಿಲ್ಲಾ ಆಸ್ಪತ್ರೆ

3874(4615); ಶ್ರೀ ಮೇಟಿ ಹುಲ್ಲಪ್ಪ ಯಮನಪ್ಪ (ಬಾಗಲಕೋಟೆ)

ಅ) ಜಿಲ್ಲಾ ಆಸ್ಪತ್ರೆ ಬಾಗಲಕೋಟೆಯಲ್ಲಿ ಸರಿಯಾಗಿ ಮೂಲಭೂತ ಸೌಕರ್ಯದ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಆಸ್ಪತ್ರೆಯ ಸಿಬ್ಬಂದಿಗಳು ಸರಿಯಾಗಿ ಕರ್ತವ್ಯ ನಿರ್ವಹಿಸದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಇ) ಬಂದಿದ್ದರೆ, ಅಂತಹ ನೌಕರರ ಮೇಲೆ ಯಾವ ಕ್ರಮ ಕೈಗೊಳ್ಳಲಾಗಿದೆ?

ಶ್ರೀ ಯು.ಟಿ. ಖಾದರ್ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು)

ಅ) ಜಿಲ್ಲಾ ಆಸ್ಪತ್ರೆ ಬಾಗಲಕೋಟೆಯಲ್ಲಿ ಅವಶ್ಯಕ ಇರುವ ಮೂಲಭೂತ ಸೌಕರ್ಯವನ್ನು ಒದಗಿಸಲಾಗಿದೆ.

ಆ) ಇಲ್ಲ

ಇ) ಅನ್ವಯಿಸುವುದಿಲ್ಲ